# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ನಾರಾಯಣಗುರು ರವರ ಸ್ಮರಣಾರ್ಥ ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ತಲಾ 01 ಶ್ರೀ ನಾರಾಯಣ ಗುರು ವಸತಿ ಶಾಲೆಗಳನ್ನು ಪ್ರಾರಂಭಿಸುವ ಬಗ್ಗೆ.

**ಓದಲಾಗಿದೆ:-**

1. 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-168.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರ ಪತ್ರ ಸಂಖ್ಯೆ:ಕವಶಿಸಸ/ಶಿಕ್ಷಣ/ಸಿಆರ್-75/2021-22 ದಿನಾಂಕ::15.03.2022.

*********

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮಸಂಖ್ಯೆ(1) ರಲ್ಲಿ 2022-23 ನೇ ಸಾಲಿನ ಆಯ-ವ್ಯಯ ಭಾಷಣ ಕಂಡಿಕೆ-168 ರಲ್ಲಿ ಮಾನ್ಯ ಮುಖ್ಯಮಂತ್ರಿಯವರು "ಮಾನವೀಯತೆ ಸಮಾನತೆಯ ಹರಿಕಾರ ಶ್ರೀ ನಾರಾಯಣ ಗುರು ರವರ ಸ್ಮರಣಾರ್ಥ ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ತಲಾ ಒಂದು "ಶ್ರೀ ನಾರಾಯಣ ಗುರು ವಸತಿ ಶಾಲೆ" ಯನ್ನು ಪ್ರಾರಂಭಿಸಲಾಗುವುದು" ಎಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮಸಂಖ್ಯೆ:(2) ರ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು 2022-23ನೇ ಸಾಲಿನ ಆಯ-ವ್ಯಯ ಭಾಷಣ ಕಂಡಿಕೆ-168 ರಲ್ಲಿ ಘೋಷಿಸಿರುವಂತೆ ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ತಲಾ ಒಂದರಂತೆ ಹಿಂದುಳಿದ ವರ್ಗದ ನಾಲ್ಕು ವಸತಿ ಶಾಲೆಗಳನ್ನು ಶ್ರೀ ನಾರಾಯಣ ಗುರು ರವರ ನಾಮಾಂಕಿತದಲ್ಲಿ ಆಂಗ್ಲ ಮಾಧ್ಯಮದಲ್ಲಿ ಪ್ರತಿ ತರಗತಿಗೆ ತಲಾ 50 ಸಂಖ್ಯಾ ಬಲದಂತೆ 6 ರಿಂದ 12 ನೇ ತರಗತಿಯವರೆಗೆ ಪ್ರಾರಂಭಿಸಲು ಅಗತ್ಯ ಹುದ್ದೆಗಳೊಂದಿಗೆ ಬೇಕಾಗಿರುವ ಅಂದಾಜು ವೆಚ್ಚವನ್ನು 2022-23ನೇ ಸಾಲಿನ ಆಯ-ವ್ಯಯದಲ್ಲಿ ಹಿಂದುಳಿದ ವರ್ಗಗಳ ಲೆಕ್ಕ ಶೀರ್ಷಿಕೆಯಡಿ ಭರಿಸಲು ಅನುಮೋದನೆ ನೀಡಲು ಹಾಗೂ ಸಂಘಕ್ಕೆ ಅಗತ್ಯವಿರುವ ಅನುದಾನವನ್ನು ಬಿಡುಗಡೆ ಮಾಡಿ ಪ್ರಸ್ತಾಪಿತ 04 ಜಿಲ್ಲೆಗಳಲ್ಲಿ "ಶ್ರೀ ನಾರಾಯಣ ಗುರು ಟೆಕ್ನೋ ವಸತಿ ಶಾಲೆ"ಗಳನ್ನು ಪ್ರಾರಂಭಿಸಲು ಸರ್ಕಾರದಿಂದ ಸೂಕ್ತ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 231 ಬಿಎಂಎಸ್ 2022, ಬೆಂಗಳೂರು, ದಿನಾಂಕ: 13-04-2022

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆಯ-ವ್ಯಯ ಭಾಷಣ ಕಂಡಿಕೆ-168 ರಲ್ಲಿ ಘೋಷಿಸಿರುವಂತೆ, ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ತಲಾ ಒಂದರಂತೆ ಶ್ರೀ ನಾರಾಯಣ ಗುರು ವಸತಿ ಶಾಲೆಯನ್ನು ಪ್ರಾರಂಭಿಸಲು ಈ ಕೆಳಕಂಡ ಷರತ್ತುಗೊಳಪಟ್ಟು ಸರ್ಕಾರವು ಅನುಮತಿ ನೀಡಿ ಆದೇಶಿಸಿದೆ.

i)2022-23ನೇ ಶೈಕ್ಷಣಿಕ ವರ್ಷದಲ್ಲಿ ಅನುದಾನದ ಲಭ್ಯತೆಯನುಸಾರ ಪರಿಶೀಲಿಸಿ ವಸತಿ ಶಾಲೆ ಪ್ರಾರಂಭಕ್ಕೆ ಅಗತ್ಯ ಮೂಲಭೂತ ಸೌಲಭ್ಯ ಒದಗಿಸಲು ಹಾಗೂ ಅಗತ್ಯ ಹುದ್ದೆಗಳ ಸೃಜನೆಗೆ -

2..

13/04/22

[illegible] ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಇವರು ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆಯನ್ನು ಕೂಡಲೇ ಸಲ್ಲಿಸುವುದು.

ii)ಸದರಿ ವಸತಿ ಶಾಲೆಗಳನ್ನು ಸ್ಥಾಪಿಸಲು ಅಗತ್ಯವಿರುವ ಭೂಮಿ/ನಿವೇಶನದ ವಿವರಗಳನ್ನು ಒಳಗೊಂಡಂತೆ ಸಮಗ್ರ ಪ್ರಸ್ತಾವನೆಯನ್ನು ಕೋಡಲೆ ಸಲ್ಲಿಸುವುದು.

ಈ ಆದೇಶವನ್ನು ಮಾನ್ಯ ಇಲಾಖಾ ಸಚಿವರ ಅನುಮೋದನೆಯೊಂದಿಗೆ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 241 ವೆಚ್ಚ-3/2022 ದಿನಾಂಕ:08.04.2022 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿಎಸ್ 31 ಐಎಂಎಂ 2022 ದಿನಾಂಕ:08.04.2022ರಲ್ಲಿ ನೀಡಿರುವ ಸಹಮತಿ ಮೇರೆಗೆ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Shaheenparveen 13/04/2022

**(ಷಾಹೀನ್ ಪರ್ವೀನ್ . ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
5. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
6. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ , ವಿಕಾಸ ಸೌಧ ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

***********